**CC 2986/2022**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 2986/2022**

**ಸಿ ಡಬ್ಲೂ -3**
**ಪಿ ಡಬ್ಲೂ - 2**

| | |
|---|---|
| **ಸಾಕ್ಷಿಯ ಹೆಸರು -** | **ಮಹಮ್ಮದ್ ಗೌಸ್** |
| **ತಂದೆಯ ಹೆಸರು -** | **ಅಮೀನ ಸಾಬ** |
| **ವಯಸ್ಸು -** | **55 ವರ್ಷಗಳು** |
| **ಉದ್ಯೋಗ -** | **ಹಣ್ಣು ವ್ಯಾಪಾರಿ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 30-08-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಮತ್ತು ಜಪ್ತು ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ 2 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ 2 (ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಎಷ್ಟು ವರ್ಷಗಳ ಹಿಂದೆ, ಎಲ್ಲಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿಃ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಮು ಮಾ ನೋಡಿದರೆ ಗುರುತಿಸಲು ಆಗುವುದಿಲ್ಲ.

ಸಾಕ್ಷಿ ನಿಪಿಃ 3 ರ ಫೋಟೋ ನೋಡಿ ಗುರುತಿಸಿರುತ್ತಾರೆ. ನಿಪಿಃ 3 ರ ಫೋಟೋ ಯಾವ ಕಾರಣಕ್ಕೆ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 21-04-2022 ರಂದು ಪ್ರಕರಣದ ತನಿಖಾಧಿಕಾರಿಯು ನನ್ನನ್ನು ಮತ್ತು ಚಾಸಾ -2 ರವರನ್ನು ಠಾಣೆಗೆ ಕರೆಸಿಕೊಂಡು ಚಾಸಾ -1 ರವರು ತೋರಿಸುವ ಸ್ಥಳದಲ್ಲಿ ದಾಳಿ ಮಾಡಿ ನಕಲಿ ಚಾರ್ಜರ್ ಮತ್ತು ಕೇಬಲ್ ಗಳನ್ನು ಜಪ್ತು ಮಾಡುವುದಿದೆ ಎಂದು ತಿಳಿಸಿದ್ದರು ಅಂದರೆ ಸರಿಯಲ್ಲ. ಬೆಳಿಗ್ಗೆ 11.00 ಗಂಟೆಗೆ ನ್ಯಾಯಾಲಯದ ಮುಂದಿರುವ ಆರೋಪಿಯ ಆಶಾಪುರ ಮೊಬೈಲ್ ಅಂಗಡಿ, ರಾಣಿ ಪೇಟೆ, ಹೊಸಪೇಟೆ ಗೆ ಹೋಗಿದ್ದೇವು ಅಂದರೆ ಸರಿಯಲ್ಲ. ಚಾಸಾ -1 ರವರು ನಮ್ಮ ಸಮಕ್ಷಮ ಇ ಆರ್ ಡಿ ಕಂಪನಿಯ ನಕಲಿ ಚಾರ್ಜರ್ ಮತ್ತು ಕೇಬಲ್ ಗಳನ್ನು ಸದರಿ ಅಂಗಡಿಯಲ್ಲಿ ತೋರಿಸಿದರು ಅಂದರೆ ಸರಿಯಲ್ಲ. ಒಟ್ಟು 51 ಬಾಕ್ಸ್ ಗಳಲ್ಲಿನ ಚಾರ್ಜರ್ ಮತ್ತು ಕೇಬಲ್ ಗಳನ್ನು ನಮ್ಮ ಸಮಕ್ಷಮ ಬೆಳಿಗ್ಗೆ 11.00 ರಿಂದ 12.30 ರವರೆಗೆ ನಿಪಿಃ 2 ರಂತೆ ಪಂಚನಾಮೆ ಮಾಡಿ ಜಪ್ತು ಪಡಿಸಿಕೊಳ್ಳಲಾಯಿತು ಅಂದರೆ ಸರಿಯಲ್ಲ. ನಾನು ಸ್ಥಳದಲ್ಲಿಯೇ ನಿಪಿಃ 2 ಕ್ಕೆ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಮು ಮಾ ಆ ದಿನ ನನ್ನ ಸಮಕ್ಷಮ ಜಪ್ತುಪಡಿಸಿಕೊಂಡಿದ್ದ ಮು ಮಾ ಆಗಿರುತ್ತದೆ ಅಂದರೆ ಸರಿಯಲ್ಲ.

ನನ್ನ ಸಮಕ್ಷಮ ನಿಪಿಃ 2 ರಂತೆ ಪಂಚನಾಮೆ ಮಾಡಿ, ನ್ಯಾಯಾಲಯದ ಮುಂದಿರುವ ಮು ಮಾ ಗಳನ್ನು ಜಪ್ತು ಪಡಿಸಿಕೊಂಡಿದ್ದರೂ ಸಹ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**CC 2986/2022**

**ಸಿ ಡಬ್ಲ್ಯೂ -3**
**ಪಿ ಡಬ್ಲ್ಯೂ - 2**

**ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎಸ್ ಹೆಚ್., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.